**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ,**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 3500/2021**
**ಚಾಸಾ ಃ-09 / ಪ್ರಾಸಾ ಃ- 6**

| | |
|---|---|
| ಹೆಸರು | **ಭಾಸ್ಕರ್ ಎಂ** |
| ತಂದೆಯ ಹೆಸರು | **ಮುನಿಸ್ವಾಮೀ** |
| ವಯಸ್ಸು | **59** |
| ಉದ್ಯೋಗ | **ಪಿ. ಎಸ್. ಐ** |
| ವಿಳಾಸ | **ಬೆಂಗಳೂರು** |

ದಿನಾಂಕಃ**07-02-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ **ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ನಾನು 2021 ರಿಂದ ಇಲ್ಲಿಯವರೆಗೆ ತಾವರೆಕೆರೆ ಪೋಲೀಸ್ ಠಾಣೆ ಪಿ. ಎಸ್. ಐ ಆ ಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕ 04-07-2021 ರಂದು ಈ ಪ್ರಕರಣದ ಕಡತವನ್ನು ಪ್ರಾಸಾ-5 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ದಿ.10-11-2021 ರಂದು ನೆಲಮಂಗಲದ ಸರ್ಕಾರಿ ಆಸ್ಪತ್ರೆಯಿಂದ ಪ್ರಾಸಾ-2 ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೇನೆ. ಈಗ ಸಾಕ್ಷಿಗೆ ಗಾಯದ ಪ್ರಮಾಣಪತ್ರವನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಗಾಯದ ಪ್ರಮಾಣಪತ್ರವನ್ನು ನಿಪಿ-11 ಎಂದು ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ದಿ.12-11-2021 ರಂದು ಆರೋಪಿಗಳ ವಿರುದ್ದ ಆರೋಪವು ಸಾಬೀತಾದ ಕಾರಣ ಆರೋಪಿಗಳ ವಿರುದ್ದ ದೋಷರೋಪಣಾ ಪಟ್ಟಿಯನ್ನು ನ್ಯಾಯಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು ಃ- ಆರೋಪಿಗಳ ಪರ ಶ್ರೀ.ವಿ. ಎಸ್, ವಕೀಲರಿಂದ ಃ-**

ನೀವು ಸರಿಯಾಗಿ ತನಿಖೆಯನ್ನು ಮಾಡದೇ ಆರೋಪಿಗಳ ವಿರುದ್ದ ಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ

ಎನ್ನುತ್ತಾರೆ. ನೀವು ನಿಪಿ-11 ರಂತೆ ಪ್ರಾಸಾ-2 ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ನೀವು ಪ್ರಾಸಾ-2 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ**